ವಿ.ವಾ-9-9-20

# ಏರ್ ಆಂಬುಲೆನ್ಸ್ ಸೇವೆ ಆರಂಭ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಕೋವಿಡ್-19 ಸೇರಿ ತುರ್ತು ಸಂದರ್ಭದಲ್ಲಿ ರೋಗಿಗಳನ್ನು ಸಕಾಲಕ್ಕೆ ಆಸ್ಪತ್ರೆಗಳಿಗೆ ದಾಖಲಿಸಲು ಅನುವಾಗುವಂತೆ ಖಾಸಗಿ ಸಂಸ್ಥೆ ಆರಂಭಿಸಿರುವ ಅತ್ಯಾಧುನಿಕ ಸೌಲಭ್ಯ ಹೊಂದಿರುವ ಏರ್ ಆಂಬುಲೆನ್ಸ್ ಸೇವೆಗೆ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮಂಗಳವಾರ ಚಾಲನೆ ನೀಡಿದರು.

» ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಸಿರು ನಿಶಾನೆ

ಯಲಹಂಕದ ಜಕ್ಕೂರು ವಿಮಾನ ನಿಲ್ದಾಣದಲ್ಲಿ ದೇಶದ ಮೊದಲ ಸಂಯೋಜಿತ ಏರ್ ಆಂಬುಲೆನ್ಸ್ ಸೇವೆ ಉದ್ಘಾಟಿಸಿ ಮಾತನಾಡಿದ ಯಡಿಯೂರಪ್ಪ, ಕರೊನಾ ಸಮಸ್ಯೆ ಎದುರಾಗಿರುವ ಸಂದರ್ಭದಲ್ಲಿ ರೋಗಿಗಳಿಗೆ ಸಕಾಲಿಕ ಚಿಕಿತ್ಸೆ ನೀಡುವುದು ಮಹತ್ವದ್ದಾಗಿದೆ. ಈ ನಿಟ್ಟಿನಲ್ಲಿ ಸ್ಥಿರ ವಿಂಗ್ ವಿಮಾನಗಳು, ಹೆಲಿಕಾಪ್ಟರ್ ಮತ್ತು ಲ್ಯಾಂಡ್ ಆಂಬುಲೆನ್ಸ್ ಸೇವೆಗಳನ್ನು ಒಳಗೊಂಡ ಏರ್ ಆಂಬುಲೆನ್ಸ್ ಸೇವೆ ಬಳಸಿಕೊಳ್ಳಬಹುದಾಗಿದೆ. ಇದು ಇಡೀ ದಕ್ಷಿಣ ಭಾರತಕ್ಕೆ ಉತ್ತಮ ಸೇವೆ ಒದಗಿಸಲಿದೆ ಎಂದರು.

ಆರೋಗ್ಯನೀತಿ ಜಾರಿಗೆ ತಂದ ಮೊದಲ ರಾಜ್ಯ ಕರ್ನಾಟಕ. ಏರ್ ಆಂಬುಲೆನ್ಸ್ ಸೇವೆ ಕೂಡ ಸರ್ಕಾರ ಬೆಂಬಲಿತ ಆರೋಗ್ಯ ಯೋಜನೆಯಾಗಿದೆ. ಇದರಿಂದ ಹೊರ ವಲಯದಲ್ಲಿರುವ ಆರೋಗ್ಯ ಕೇಂದ್ರಗಳಿಂದ ನಗರದ ಕೇಂದ್ರಗಳಿಗೆ ಸಂಪರ್ಕ ಕಲ್ಪಿಸಲು ಹಾಗೂ ರೋಗಿಗಳಿಗೆ ಶೀಘ್ರ ಆರೋಗ್ಯ ಸೇವೆಯೊಂದಿಗೆ ತುರ್ತು ಚಿಕಿತ್ಸೆ ದೊರಕಿಸಲು ನೆರವಾಗಲಿವೆ ಎಂದರು. ಐಕ್ಯಾಟ್ ಮತ್ತು ಕ್ಯಾತಿ ಕ್ಲೈಮೇಟ್ ಸಂಸ್ಥೆಯವರು ಏರ್ ಆಂಬುಲೆನ್ಸ್ ಸೇವೆ ಒದಗಿಸುವ ಮೂಲಕ ಕೋವಿಡ್ ವಿರುದ್ಧದ ಹೋರಾಟದಲ್ಲಿ ಸರ್ಕಾರದೊಂದಿಗೆ ಕೈಜೋಡಿಸಿರುವುದು ಶ್ಲಾಘನೀಯ ಎಂದು ಹೇಳಿದರು.

ಡಿಸಿಎಂಗಳಾದ ಡಾ. ಸಿ.ಎನ್. ಅಶ್ವತ್ಥನಾರಾಯಣ, ಗೋವಿಂದ ಕಾರಜೋಳ, ಸಚಿವರಾದ ಶ್ರೀರಾಮುಲು, ಡಾ.ಕೆ.ಸುಧಾಕರ್, ಸಿ.ಟಿ.ರವಿ, ಏರ್ ಆಂಬುಲೆನ್ಸ್ ಸಿಇಒ ಡಾ.ಶಾಲಿನಿ ನಲ್ವಾಡ್ ಇತರರಿದ್ದರು.



ವಿಜಯವಾಣಿ

ಜಕ್ಕೂರು ವಿಮಾನ ನಿಲ್ದಾಣದಲ್ಲಿ ಏರ್ ಆಂಬುಲೆನ್ಸ್ ಸೇವೆಯನ್ನು ಮುಖ್ಯಮಂತ್ರಿ ಬಿಎಸ್‌ವೈ ಉದ್ಘಾಟಿಸಿದರು. ಡಿಸಿಎಂಗಳಾದ ಅಶ್ವತ್ಥನಾರಾಯಣ, ಗೋವಿಂದ ಕಾರಜೋಳ ಇತರರಿದ್ದರು.